ಅಧ್ಯಕ್ಷರು : – ಈಗ 2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ – 3) ಅನ್ನು ಮಾನ್ಯ ಮುಖ್ಯಮಂತ್ರಿಯವರು ಸಭೆಯ ಮುಂದೆ ಮಂಡಿಸಬೇಕು.

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು) : – ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ – 3) ಅನ್ನು ಮಂಡಿಸುವುದಕ್ಕೆ ಸಭೆಯು ಅನುಮತಿ ನೀಡಬೇಕು.

ಅಧ್ಯಕ್ಷರು : – ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ,

2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ – 3) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು **"ಹೌದು"** ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು **"ಇಲ್ಲ"** ಎಂದು ಸೂಚಿಸಬೇಕು.

ಪ್ರಸ್ತಾವ **"ಹೌದು"** ಎನ್ನುವವರ ಪರವಾಗಿದೆ,

ಪ್ರಸ್ತಾವ **"ಹೌದು"** ಎನ್ನುವವರ ಪರವಾಗಿದೆ,

ಪ್ರಸ್ತಾವ ಅಂಗೀಕೃತವಾಗಿದೆ.

ಮಾನ್ಯ ಮುಖ್ಯಮಂತ್ರಿಯವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು) : – ಮಾನ್ಯ ಅಧ್ಯಕ್ಷರೆ, ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು : – ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ – 2)

(ಈ ಹಂತದಲ್ಲಿ ಬಾವಿಯಲ್ಲಿ ನಿಂತಿದ್ದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧವಾಗಿ ಘೋಷಣೆಯನ್ನು ಕೂಗುತ್ತಿದ್ದರು.)

3) 2012ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ

ಅಧ್ಯಕ್ಷರು : – 2012ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಾನ್ಯ ಮುಖ್ಯಮಂತ್ರಿಯವರು ಸಭೆಯ ಮುಂದೆ ಮಂಡಿಸಬೇಕು.

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು) : – ಮಾನ್ಯ ಅಧ್ಯಕ್ಷರೆ, 2012 ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ನೀಡಬೇಕು.

ಅಧ್ಯಕ್ಷರು : – ಪ್ರಸ್ತಾವನೆಯನ್ನು ಮಂಡಿಸಲಾಯಿತು.
ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.
ಪ್ರಸ್ತಾವನೆ ಹೀಗಿದೆ :

2012ನೇ ಸಾಲಿನ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿಯನ್ನು ನೀಡಬೇಕು.

ಪ್ರಸ್ತಾವದ ಪರವಾಗಿರುವವರು **"ಹೌದು"** ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು **"ಇಲ್ಲ"** ಎಂದು ಸೂಚಿಸಬೇಕು.
ಪ್ರಸ್ತಾವ **"ಹೌದು"** ಎನ್ನುವವರ ಪರವಾಗಿದೆ,
ಪ್ರಸ್ತಾವ **"ಹೌದು"** ಎನ್ನುವವರ ಪರವಾಗಿದೆ,
ಪ್ರಸ್ತಾವ **ಅಂಗೀಕೃತವಾಗಿದೆ.**
ಮಾನ್ಯ ಮುಖ್ಯ ಮಂತ್ರಿಯವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸುಬೇಕು.

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು) : – ಮಾನ್ಯ ಅಧ್ಯಕ್ಷರೆ, ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು : – ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ – 3)

(ಈ ಹಂತದಲ್ಲಿ ಬಾವಿಯಲ್ಲಿದ್ದಂತಹ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಯನ್ನು ಕೂಗುತ್ತಿದ್ದರು.)

ಆ) ವಿಧೇಯಕಗಳ ಪರ್ಯಾಲೋಚನೆ ಮತ್ತು ಅಂಗೀಕಾರ